ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/77/ಹೈಕಬೋಸ್ಥ/2014-15/ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.
ದಿನಾಂಕ:06.05.2021

**ಅಧಿಕೃತ ಜ್ಞಾಪನ**

ವಿಷಯ: ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದವನ್ನು ಸೇರಲು ಇಚ್ಛಿಸುವ ಬೋಧಕ ಸಿಬ್ಬಂದಿಗಳು ಸಂಬಂದಪಟ್ಟ ಕಾಲೇಜಿನ ಪ್ರಾಂಶುಪಾಲರ ಮೂಲಕ ಅರ್ಜಿ/ಮನವಿ ಸಲ್ಲಿಸುವಂತೆ ಸೂಚಿಸಿ ಹೊರಡಿಸಲಾಗಿದ್ದ ಸುತ್ತೋಲೆಯನ್ನು ಹಿಂಪಡೆಯುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 06 ಪಿಎಲ್‌ಎಕ್ಸ್ 2012,ದಿನಾಂಕ:06.11.2013

2) ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013, ದಿನಾಂಕ:29.01.2014 ಮತ್ತು 20.10.2014.

3) ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/06/ಹೈ.ಕ/2014-15/ವ&ನಿ, ದಿ:29.04.2014.

4) ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:01.02.2021.

* * * * * *

ಭಾರತದ ಸಂವಿಧಾನದ ಅನುಚ್ಛೇದ 371(ಜೆ) ರನ್ವಯ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಉದ್ಯೋಗದಲ್ಲಿ ಮೀಸಲಾತಿ ನೀಡುವ ಬಗ್ಗೆ ಉಲ್ಲೇಖ-(1) ರ ಸರ್ಕಾರದ ಆದೇಶದಲ್ಲಿ ಅಧಿಸೂಚಿಸಿ ಸದರಿ ಆದೇಶದ ಅಧ್ಯಾಯ-I ರ ನಿಯಮ-3 ರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿನ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಎ, ಬಿ, ಸಿ ಮತ್ತು ಡಿ ಸಮೂಹದಲ್ಲಿ ವ್ಯವಸ್ಥೆಗೊಳಿಸಲು ಆದೇಶಿಸಲಾಗಿದೆ ಮತ್ತು ಉಲ್ಲೇಖ(2)ರ ದಿನಾಂಕ:29.01.2014ರ ಅಧಿಸೂಚನೆ ನಿಯಮ(6)ರಲ್ಲಿ ಸ್ಥಳೀಯ ವೃಂದಕ್ಕೆ ಸೇರಲು ಇಚ್ಛಿಸುವ ನೌಕರರಿಂದ ಅನುಬಂಧ-ಸಿ ರಲ್ಲಿ ನಿರ್ದಿಷ್ಟಪಡಿಸಿದ ನಮೂನೆಯಲ್ಲಿ 30 ದಿನಗಳೊಳಗಾಗಿ ಆಯ್ಕೆಯನ್ನು ಚಲಾಯಿಸಲು ಅರ್ಜಿಯನ್ನು ಆಹ್ವಾನಿಸಿ ಮಾಹಿತಿಗಳನ್ನು ಪಡೆಯಲಾಗಿರುತ್ತದೆ. ನಂತರ ಸರ್ಕಾರದ ಅಧಿಸೂಚನೆ ದಿನಾಂಕ:20.10.2014ರ 06ನೇ ನಿಯಮದ 1ನೇ ಉಪನಿಯಮಕ್ಕೆ ತಿದ್ದುಪಡಿ ಮಾಡಿ 30 ದಿನಗಳ ಬದಲಾಗಿ 45 ದಿನಗಳ ಕಾಲಾವಕಾಶವನ್ನು ನೀಡಿ ಆದೇಶಿಸಲಾಗಿರುತ್ತದೆ. ಆದುದರಿಂದ ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಹೆಚ್ಚುವರಿ / ಪೂರಕ ಮಾಹಿತಿ ಇದ್ದಲ್ಲಿ ಮತ್ತೊಮ್ಮೆ ಸಲ್ಲಿಸಲು ಹಾಗೂ ಆ ಅವಧಿಯಲ್ಲಿ ಸಲ್ಲಿಸದೆ ಇರುವವರು ಮಾಹಿತಿಯನ್ನು ಸಲ್ಲಿಸುವಂತೆ ತಿಳಿಸಿ ಉಲ್ಲೇಖ-(4)ರ ಸುತ್ತೋಲೆಯಲ್ಲಿ ಮತ್ತೊಮ್ಮೆ ಸಲ್ಲಿಸುವಂತೆ ತಿಳಿಸಲಾಗಿತ್ತು.

ಪ್ರಸ್ತುತ, ಈ ಹಿಂದೆ ಸಲ್ಲಿಸಿದ್ದ ಮಾಹಿತಿಗಳು ಸಮರ್ಪಕವಾಗಿರುವುದು ಕಂಡುಬಂದಿರುವುದರಿಂದ ಮತ್ತೊಮ್ಮೆ ಮಾಹಿತಿ ಪಡೆಯುವ ಅಗತ್ಯವಿರುವುದಿಲ್ಲವೆಂದು ಮನಗಂಡು ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ 02 ಕಕವಿಕೋ 2020-21, ದಿನಾಂಕ:01.02.2021 ಅನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.

6/5/21
ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

<u>ಇವರಿಗೆ;</u>

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಕಲಬುರಗಿ.
2. ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಸಂಬಂಧಪಟ್ಟ ಬೋಧಕ ಸಿಬ್ಬಂದಿಗಳಿಗೆ.
4. ಮಾಹಿತಿ ತಂತ್ರಜ್ಞಾನ ಅಧಿಕಾರಿ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು. - ಇಲಾಖಾ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಿದೆ.
5. ಕಛೇರಿ ಪ್ರತಿ